ಸಂಯುಕ್ತ ಕರ್ನಾಟಕ

Thursday, January 14th, 2010

# ಅಕ್ರಮ–ಸಕ್ರಮ ಯೋಜನೆಗೆ ಲೋಕಾಯುಕ್ತ ವಿರೋಧ



ಲೋಕಾಯುಕ್ತ ನ್ಯಾಯಮೂರ್ತಿ ಎನ್.ಸಂತೋಷ್ ಹೆಗ್ಡೆ ಬುಧವಾರ ನಗರದ ಶ್ರೀ ಭಗವಾನ್ ಮಹಾವೀರ ಜೈನ್ ಕಾಲೇಜಿನ ಕನ್ನಡ ವೇದಿಕೆ ಏರ್ಪಡಿಸಿದ್ದ ಜಾಗೃತಿ ಹಬ್ಬ ಕಾರ್ಯಕ್ರಮದಲ್ಲಿ ವಿದ್ಯಾರ್ಥಿನಿಯರ ಜೊತೆ ಸಂವಾದ ನಡೆಸಿದ ಸಂದರ್ಭದಲ್ಲಿ ಜೈನ್ ವಿಶ್ವವಿದ್ಯಾಲಯದ ಕುಲಪತಿ ಚೆನ್‌ರಾಜ್ ಜೈನ್ ಉಪಸ್ಥಿತರಿದ್ದರು.

**ಬೆಂಗಳೂರು, ಜ. 13:** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಅಕ್ರಮವಾಗಿ ನಿರ್ಮಾಣ ಮಾಡಿರುವ ಮನೆ ಹಾಗೂ ಕಟ್ಟಡಗಳನ್ನು ಸಕ್ರಮಗೊಳಿಸಲು ಮುಂದಾಗಿರುವ ರಾಜ್ಯ ಸರ್ಕಾರದ ನಿರ್ಧಾರಕ್ಕೆ ಲೋಕಾಯುಕ್ತ ನ್ಯಾಯಮೂರ್ತಿ ಎನ್. ಸಂತೋಷ್ ಹೆಗ್ಡೆ ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ.

ಕಾಯ್ದೆ ಉಲ್ಲಂಘಿಸಿ, ಅಕ್ರಮವಾಗಿ ನಿರ್ಮಿಸಿಕೊಂಡಿರುವ ಕಟ್ಟಡಗಳನ್ನು ಸಕ್ರಮಗೊಳಿಸುವುದು ಸರಿಯಲ್ಲ. ಒಂದು ವೇಳೆ ಸಕ್ರಮ ಮಾಡಿದರೆ ಅದು ಕಾನೂನಿಗೆ ವಿರುದ್ಧವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ನಗರದ ಶ್ರೀ ಭಗವಾನ್ ಮಹಾವೀರ ಜೈನ್ ಕಾಲೇಜಿನ ಕನ್ನಡ ವೇದಿಕೆ ಹಮ್ಮಿಕೊಂಡಿದ್ದ 'ಜಾಗೃತಿ ಹಬ್ಬ'ದಲ್ಲಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದ ಅವರು, ನಗರ ಯೋಜನಾ ಕಾಯ್ದೆಯನ್ನು ಉಲ್ಲಂಘಿಸಿ ಯಾವುದೇ ನಿರ್ಮಾಣ ಆಗದಂತೆ ಈಗಿರುವ ಕಾನೂನಿಗೆ ತಿದ್ದುಪಡಿ ತರಬೇಕು. ಅದನ್ನು ಬಿಟ್ಟು ಈಗ ಕಾಯ್ದೆ ಉಲ್ಲಂಘಿಸಿ ಕಟ್ಟಿಕೊಂಡಿರುವ ಮನೆಗಳ ಸಕ್ರಮ ಸರಿಯಲ್ಲ ಎಂದು ಹೇಳಿದರು.

ಇಡೀ ಸಮಾಜದಲ್ಲಿ ಕ್ಯಾನ್ಸರ್‌ನಂತೆ ಹಬ್ಬುತ್ತಿರುವ ಭ್ರಷ್ಟಾಚಾರ ನಿರ್ಮೂಲನೆ ತಡೆಯಲು ಕೇವಲ ಲೋಕಾಯುಕ್ತರಿಂದ ಸಾಧ್ಯವಿಲ್ಲ. ಎಲ್ಲಿವರೆಗೆ ಲಂಚ ಕೊಡುವವರು ಇರುತ್ತಾರೋ ಅಲ್ಲಿವರೆಗೆ ಲಂಚ ಸ್ವೀಕರಿಸುವವರು ಇರುತ್ತಾರೆ. ಹಾಗಾಗಿ ಮೊದಲು ನಮ್ಮನ್ನು ನಾವು ನಿಯಂತ್ರಣ ಮಾಡಿಕೊಳ್ಳಬೇಕು. ವಿಶೇಷವಾಗಿ ಭ್ರಷ್ಟಾಚಾರ ನಿಯಂತ್ರಣದಲ್ಲಿ ವಿದ್ಯಾರ್ಥಿಗಳ ಪಾತ್ರ ಬಹು ಮುಖ್ಯವಾಗಿದೆ. ಶೈಕ್ಷಣಿಕ ಹಂತದಲ್ಲಿ ವಿದ್ಯಾರ್ಥಿಗಳು ಭ್ರಷ್ಟಾಚಾರದ ಬಗ್ಗೆ ಜಾಗೃತಿ ಮೂಡಿಸಬೇಕು. ಎನ್‌ಎಸ್‌ಎಸ್ ಶಿಬಿರದಲ್ಲಿ ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಇಂದಿನ ಪರಿಸ್ಥಿತಿಯಲ್ಲಿ ರಾಜಕಾರಣಿಗಳು ಮತ್ತು ಸರ್ಕಾರಿ ನೌಕರರು ಭ್ರಷ್ಟಾಚಾರದಲ್ಲಿ ಸಯಾಮಿಗಳಿದ್ದಂತೆ ಒಬ್ಬರನ್ನು ಬಿಟ್ಟು ಮತ್ತೊಬ್ಬರಿಲ್ಲ ಎಂದ ಅವರು, ಈ ಹಿಂದೆ ಭ್ರಷ್ಟಾಚಾರಿಗಳು ಯಾರು ಎಂದು ಹುಡುಕಬೇಕಾಗಿತ್ತು. ಆದರೆ ಇಂದು ಪ್ರಾಮಾಣಿಕರು ಯಾರು ಎಂದು ಹುಡುಕುವಂತಹ ಪರಿಸ್ಥಿತಿ ಇದೆ ಎಂದು ವಿಷಾದಿಸಿದರು. ಭ್ರಷ್ಟಾಚಾರ ಪ್ರಕರಣದಲ್ಲಿ ಅಮಾನತುಗೊಂಡ ಇಂಜನಿಯರ್‌ಗಳಿಗೆ ಬಡ್ತಿ ನೀಡುವುದು ಹಾಗೂ ಅವರ ಅಮಾನತು ಮಾಡುವುದು ಸರಿಯಾದ ಕ್ರಮ ಅಲ್ಲ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜೈನ್ ವಿಶ್ವವಿದ್ಯಾಲಯದ ಕುಲಪತಿ ಆರ್. ಚೆನ್‌ರಾಜ್ ಜೈನ್ ವಹಿಸಿದ್ದರು.